# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಸಾರ್ವಜನಿಕ/ಸರ್ಕಾರಿ ನೌಕರರಾದ ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕ್ ಮಾವಿನಕೆರೆ ಗ್ರಾಮ ಪಂಚಾಯತ್‌ನ ಕಾರ್ಯದರ್ಶಿ ಶ್ರೀ ಶಿವಕುಮಾರ್ ರವರು ಕರ್ತವ್ಯ ಲೋಪ/ದುರ್ವತನೆ ಎಸಗಿರುವ ಬಗ್ಗೆ- ಆದೇಶ.

**ಓದಲಾಗಿದೆ:** 1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ-819/2015/ಎಆರ್‌ಎಲ್‌ಓ1, ದಿನಾಂಕ: 06-04-2017.

2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ ಬಿಡಿ-819/2015/ಸನಿಕಾಸ-1, ದಿನಾಂಕ: 22-02-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ: 06-04-2017 ರವರ ಪತ್ರದೊಂದಿಗೆ ಕನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 7(2) ರನ್ವಯ ಮಾನ್ಯ ಉಪಲೋಕಾಯುಕ್ತರವರ ಸಲ್ಲಿಸಿರುವ ವರದಿಯಲ್ಲಿ ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕು, ಮಾವಿನಕೆರೆ ಗ್ರಾಮ ಪಂಚಾಯತ್ ಕಾರ್ಯದರ್ಶಿ ಶ್ರೀ ಶಿವಕುಮಾರ್ (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

**ದೂರಿನ ಸಂಕ್ಷೀಪ್ತ ವಿವರಣೆ:**

ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕ್ ಮಾವಿನಕೆರೆ ಗ್ರಾಮ ಪಂಚಾಯತ್‌ಗೆ ಸೇರಿದ ಕಾಡನೂರು ಗ್ರಾಮದಲ್ಲಿರುವ ತಮ್ಮ ಮನೆಯ ಹಿಂಭಾಗದ ಮಾಲೀಕರು ಖಾನೇಷುಮಾರಿ ನಂ.118 ರಲ್ಲಿ ಅಳತೆಗಿಂತ ಹೆಚ್ಚಾಗಿ ಹಾಗೂ ತಮ್ಮ ಮನೆಯ ದಾರಿಗೆ ಅಡ್ಡಲಾಗಿ ಸ್ನಾನದ ಗೃಹ ಮತ್ತು ಶೌಚಾಲಯ ನಿರ್ಮಿಸಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಎದುರುದಾರರಿಗೆ ತಿಳಿಸಿದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಹೇಳಿದ್ದಾರೆ.

ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ- ಕಾಡಸೂರು ಗ್ರಾಮದ ಖಾತೆ ನಂ.63/118 ಮತ್ತು 119 ರಲ್ಲಿ ಶ್ರೀ ಬಿ ಶಿವಪ್ಪ ಬಿನ್ ಬೋರೆಗೌಡ ರವರ ಹೆಸರಿನಲ್ಲಿದ್ದು, ಅದರ ಖಾನೇಷುಮಾರಿ ನಂ.118 ರಲ್ಲಿ 33*44 ರಲ್ಲಿ ಹಂಚಿನ ಮನೆ ಮತ್ತು ಖಾನೇಷುಮಾರಿ ನಂ. 119 ರಲ್ಲಿ 33-13 ರ ವಿಸ್ತೀರ್ಣದ ಆಸ್ತಿಯಲ್ಲಿ ಖಾಲಿ ಜಾಗವಿದೆ. ಸದರಿ ಜಾಗದಲ್ಲಿ ಸಾರ್ವಜನಿಕರಿಗೆ ಓಡಾಡಲು 8.5 ಅಡಿ ಜಾಗವನ್ನು ಬಿಟ್ಟು, ಅವರ ಜಾಗದಲ್ಲಿ ಶೌಚಾಲಯವನ್ನು ನಿರ್ಮಿಸಿದ್ದಾರೆ. ಸದರಿ ಶೌಚಾಲಯಕ್ಕೆ ಸಂಬಂಧಪಟ್ಟಂತೆ ಸಾರ್ವಜನಿಕರಿಂದ ಯಾವುದೇ ತೊಂದರೆ ಬಂದಿಲ್ಲವೆಂದು ಹೇಳಿದ್ದಾರೆ.

ಎದುರುದಾರರ ಆಕ್ಷೇಪಣೆಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ಆಕ್ಷೇಪಣೆಯ ಅಂಶಗಳನ್ನು ಅಲ್ಲಗಳೆದು, ದೂರಿನಲ್ಲಿನ ಅಂಶಗಳನ್ನೇ ಮನರುಚ್ಚರಿಸಿ ಪ್ರತ್ಯುತ್ತರವನ್ನು ಸಲ್ಲಿಸಿದ್ದಾರೆ.

**ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:-**

ದೂರುದಾರರ ಎದುರುಗಡೆ ಇರುವ ಖಾತಾ ನಂ.63/118 ಮತ್ತು 119 ರ ಆಸ್ತಿಯು ಶ್ರೀ ಬಿ ಶಿವಪ್ಪ ಬಿನ್ ಬೋರೇಗೌಡ ರವರ ಹೆಸರಿನಲ್ಲಿದ್ದು, ಸದರಿ ಶೌಚಾಲಯ ಮತ್ತು ಸ್ನಾನದ ಮನೆ ನಿರ್ಮಿಸಿರುವ ಜಾಗ ಸರ್ಕಾರಿ ರಸ್ತೆಯೋ? ಅಥವಾ ಶ್ರೀ ಬಿ ಶಿವಪ್ಪ ಬಿನ್ ಬೋರೆಗೌಡ ರವರಿಗೆ ಸೇರಿದ ಆಸ್ತಿಯೋ? ಎಂಬ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಈ ಸಂಬಂಧವಾಗಿ ದೂರುದಾರರು ಅಧ್ಯಕ್ಷರು/ಕಾರ್ಯನಿರ್ವಾಹಣಾಧಿಕಾರಿ, ತುರುವೇಕೆರೆ ರವರಿಗೆ ದೂರು ಸಲ್ಲಿಸಿದ್ದು, ಸದರಿಯವರು ಕ್ರಮ ಕೈಗೊಳ್ಳುವಂತೆ ಎದುರುದಾರರಿಗೆ ಆದೇಶಿಸಿದ್ದಾರೆ. ಆದರೆ, ಎದುರುದಾರರು ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಸದರಿ ವಿಚಾರವಾಗಿ ತುರುವೇಕೆರೆ ಪೋಲಿಸರಿಗೆ ದೂರುದಾರರು ದೂರನ್ನು ನೀಡಿರುವುದು ದಾಖಲೆಗಳಿಂದ ಕಂಡುಬಂದಿದೆ. ಎದುರುದಾರರು ತಮ್ಮ ಪಂಚಾಯತಿ ವ್ಯಾಪ್ತಿಗೆ ಸಂಬಂಧಪಟ್ಟ ರಸ್ತೆ ಒತ್ತುವರಿ ಮಾಡಿ, ಯಾವುದೇ ಕಟ್ಟಡ ನಿರ್ಮಿಸಿದ್ದಲ್ಲಿ ತಕ್ಷಣ ಸ್ಥಳಕ್ಕೆ ಭೇಟಿ, ತನಿಖೆ ನಡೆಸಿ ಒತ್ತುವರಿ ಮಾಡಿರುವ ಪ್ರದೇಶವನ್ನು ತೆರವುಗೊಳಿಸುವುದು ಎದುರುದಾರರ ಕರ್ತವ್ಯವಾಗಿದೆ. ಆದರೆ, ದೂರುದಾರರು ನೀಡಿದ ದೂರಿಗೆ ಸಂಬಂದಪಟ್ಟಂತೆ, ಸ್ಥಳ ತನಿಖೆ ಮಾಡಿ, ಸದರಿ ಶೌಚಾಲಯ ಮತ್ತು ಸ್ನಾನದ ಮನೆ ನಿರ್ಮಿಸಿರುವ ಜಾಗ ಸರ್ಕಾರಿ

ರಸ್ತೆಯೋ? ಅಥವಾ ಶ್ರೀ ಬಿ ಶಿವಪ್ಪ ಬಿನ್ ಬೋರೆಗೌಡ ರವರಿಗೆ ಸೇರಿದ ಆಸ್ತಿಯೋ? ಎಂಬ ಬಗ್ಗೆ ಎದುರುದಾರರು ಯಾವುದೇ ಕ್ರಮ ಕೈಗೊಳ್ಳದೇ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳನ್ನು ಹಾಗೂ ಎದುರುದಾರ ಆಕಷೇಪಣೆಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡುವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಆದ್ದರಿಂದ ಶ್ರೀ ಶಿವಕುಮಾರ್, ಮಾವಿನಕೆರೆ ಗ್ರಾಮ ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆಯಾದ ಇವರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೇ, ಕರ್ತವ್ಯಲೋಪವೆಸಗಿ, ದುರ್ವರ್ತನೆ ತೋರಿಸಿ ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಮದ ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ, 1966 ರ ನಿಯಮಗಳು 3(1) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿರುವುದರಿಂದ, ಅವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಶ್ರೀ ಶಿವಕುಮಾರ್, ಮಾವಿನಕೆರೆ ಗ್ರಾಮ ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/313/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 03-05-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಶಿವಕುಮಾರ್, ಮಾವಿನಕೆರೆ ಗ್ರಾಮ ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧದ ಆಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ 14(ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಇವರಿಗೆ ವಹಿಸಲಾಗಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3) ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 35 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ.
6) ಶ್ರೀ ಶಿವಕುಮಾರ್, ಮಾವಿನಕೆರೆ ಗ್ರಾಮ ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ
7) ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.